**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.**

**ದಿಃ 23.08.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಪಾಟೀ ಸವಾಲುಃ ಎದುರುದಾರರ ಪರ ಶ್ರೀ ಪಿ ಜೆ ಎ ವಕೀಲರಿಂದಃ**

ನಾನು ಶಾಲೆ ಕಲಿತಿಲ್ಲ. ನನ್ನ ಪ್ರಮಾಣಪತ್ರದಲ್ಲಿ ಏನು ಬರೆದಿದೆ ಎಂದು ನನಗೆ ಮಾಹಿತಿ ಇದೆ. ನನ್ನ ವಯಸ್ಸನ್ನು ತೋರಿಸಲು ನ್ಯಾಯಾಲಯಕ್ಕೆ ಯಾವುದಾದರೂ ದಾಖಲೆ ಹಾಜರಪಡಿಸಿದ್ದಿರಾ ಎಂದರೆ ಆಧಾರ ಕಾರ್ಡ ಹಾಜರಪಡಿಸಿದ್ದೇನೆ ಎನ್ನುತ್ತಾರೆ. ನನ್ನ ವಯಸ್ಸನ್ನು ತೋರಿಸಿಕೊಳಳಲು ಯಾವುದೇ ಸರ್ಕಾರಿ ದಾಖಲೆಯನ್ನು ಹಾಜರಪಡಿಸಿಲ್ಲ ಎಂದರೆ ಸರಿಯಲ್ಲ. ನಮ್ಮದು ಬಿ ಪಿ ಎಲ್ ಕಾರ್ಡ ಇದೆ. ಅದನ್ನು ನ್ಯಾಯಾಲಯಕ್ಕೆ ಹಾಜರಪಡಿಸುತ್ತೇನೆ ಎನ್ನುತ್ತಾರೆ. ಈಗಲೂ ಕೂಡ ನಾನು ಸಮಾಜ ಕಲ್ಯಾಣ ಇಲಾಖೆಯ ಸರ್ಕಾರಿ ಹಾಸ್ಟೇಲ್‌ನಲ್ಲಿ ಅಡುಗೆ ಸಹಾಯಕಿಯಾಗಿ ಕೆಲಸ ಮಾಡುತ್ತಿದ್ದೇನೆ. ನನ್ನ ಅರ್ಜಿಯಲ್ಲಾಗಲೀ ಪ್ರಮಾಣಪತ್ರದಲ್ಲಾಗಲೀ ಈ ವಿಚಾರವನ್ನು ದುರುದ್ದೇಶದಿಂದ ನಮೂದು ಮಾಡಿಲ್ಲ ಎಂದರೆ ಸಾಕ್ಷಿ ಬರೆಸಿದರೆ ಆಯಿತು ಎನ್ನುತ್ತಾರೆ. ಡಿಸೆಂಬರ್ 11 ನೇ ತಾರೀಕು ಶಹಾಪುರದಿಂದ ಹುಬ್ಬಳ್ಳಿಗೆ ಯಾವ ವಾಹನದಲ್ಲಿ ಹೋಗುತ್ತಿದ್ದಿರಿ ಎಂದರೆ ಸಾಕ್ಷಿ ನನಗೆ ನಿಖರವಾಗಿ ಹೇಳಲು ಆಗುವುದಿಲ್ಲ ಎನ್ನುತ್ತಾರೆ. ಆ ಸಮಯದಲ್ಲಿ ನೀವು ಎಚ್ಚರವಾಗಿದ್ದೀರಾ ಅಥವಾ ಮಲಗಿಕೊಂಡಿದ್ದೀರಾ ಎಂದರೆ ಎಚ್ಚರವಾಗಿದ್ದೆ ಎನ್ನುತ್ತಾರೆ. ಕೆಎ-33/ಎಂ-4457 ನೇ ಕಾರ್ ಆ ದಿನ ಅತೀ ವೇಗವಾಗಿ ಕ್ರೂಸರ್ ವಾಹನವನ್ನು ಓವರ್ ಟೆಕ್ ಮಾಡಿಕೊಂಡು ಹೋದರು ಎಂದರೆ ಸಾಕ್ಷಿ ಸರಿಯಲ್ಲ ಎನ್ನುತ್ತಾರೆ. ಸದರಿ ಕಾರಿನ ಚಾಲಕನ ತಪ್ಪಿನಿಂದಲೇ ಅಪಘಾತವಾಗಿದೆ ಆದರೂ ಕೂಡ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಬಸ್ ಹಂಪ್ಸನ ಬಳಿ ನಿಧಾನವಾಗಿ ಹೋಗುತ್ತಿತ್ತು ಆ ಸಮಯದಲ್ಲಿ ನಮ್ಮ ಕಾರಿನ ಚಾಲಕ ಅತೀ ವೇಗವಾಗಿ ಬಂದು ಬಸ್ ಗೆ ಡಿಕ್ಕಿ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಅಪಘಾತ ಹೇಗಾಯಿತು ಎಂದು ನಾನು ವೈದ್ಯರ ಮುಂದೆ ಹೇಳಿಲ್ಲ ಎಂದರೆ ಸಾಕ್ಷಿ ನಾನು ಹೇಳಿದ್ದೇನೆ ಎನ್ನುತ್ತಾರೆ. ಆ ರೀತಿ ನನ್ನ ಯಾವುದೇ ಮೆಕಡಿಲ್ ಡಾಕ್ಯೂಮೆಂಟ್ ಇಲ್ಲ ಎಂದರೆ ಸರಿಯಲ್ಲ. ಕೆ ಎಸ್ ಆರ್ ಟಿಸಿ ಬಸ್ ಚಾಲಕನ ಯಾವುದೇ ತಪ್ಪು ಇರುವುದಿಲ್ಲ ಆದರೂ ಶಂಕ್ರಪ್ಪ ಇವರ ಮಾತು ಕೇಳಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಗಂಭೀರ ಸ್ವರೂಪದ ಗಾಯಗಳು ಆಗಿಲ್ಲ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಾಕ್ಷ್ಯ ಪ್ರಮಾಣಪತ್ರದಲ್ಲಿ ಮೂಳೆ ಮುರಿತ ಆಗಿದೆ ಎಂದು ಬರೆಸಿದ್ದು ಅದು ಸುಳ್ಳು ಇದೆ

ಎಂದರೆ ಸರಿಯಲ್ಲ. ನಾನು ತಿಂಗಳಿಗೆ 15 ಸಾವಿರ ಗಳಿಸುತ್ತಿದ್ದೆ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆ ಹಾಜರಪಡಿಸಿದ್ದಿರಾ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ. ನನಗೆ ಯಾವುದೇ ಅಂಗನ್ಯೂನ್ಯತೆ ಇಲ್ಲ ಹಾಗೂ ಗಳಿಕೆ ಸಾಮರ್ಥ್ಯ ನಷ್ಟವಾಗಿಲ್ಲ ಎಂದರೆ ಸರಿಯಲ್ಲ. ಶಂಕ್ರಪ್ಪ ಇವರ ಮಾತು ಕೇಳಿ ಸುಳ್ಳು ಅರ್ಜಿ ಸಲ್ಲಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಹಾಗೂ ಖೊಟ್ಟಿ ದಾಖಲೆಗಳನ್ನು ಹಾಜರಪಡಿಸಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**